All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

07.07.2026 6.40 p.m.

<><><><>

ಮುಖ್ಯಾಂಶಗಳು

- ಕೂಲಿ ಕಾರ್ಮಿಕರ ಗುಳೆ ತಪ್ಪಿಸಲು ಅಧಿಕಾರಿಗಳು ಕ್ರಮವಹಿಸುವಂತೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೂಚನೆ
- ಎಸ್‌ಐಆರ್‌ನಲ್ಲಿ ಅಕ್ರಮ ಆರೋಪ; ಮುಖ್ಯ ಚುನಾವಣಾ ಆಯುಕ್ತರಿಗೆ ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ, ಪ್ರಲ್ಹಾದ್ ಜೋಶಿ ನಿಯೋಗ ದೂರು
- ಗ್ಯಾರಂಟಿ ಯೋಜನೆಗಳಿಂದ ವಿಶ್ವಬ್ಯಾಂಕ್‌ನ ಮೇಲ್ಮಧ್ಯಮ ಆದಾಯ ಮಿತಿ ದಾಟಿದ ಕರ್ನಾಟಕ
- ಮೈಸೂರಿನ ಮೇಲ್ಸೇತುವೆ ಕಾಮಗಾರಿ ಶೀಘ್ರವೇ ಪೂರ್ಣಗೊಳಿಸುವಂತೆ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಸೂಚನೆ
- ರಾಜ್ಯದ ಹಲವೆಡೆ ಇಂದು ಭಾರೀ ಮಳೆ ಸಾಧ್ಯತೆ; ಹಲವು ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಿದ ಹವಾಮಾನ ಇಲಾಖೆ

<><><><>

ಅಧಿಕಾರಿಗಳು ಪ್ರಕೃತಿ ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಂತೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೂಚಿಸಿದ್ದಾರೆ. ಕಲಬುರಗಿಯಲ್ಲಿಂದು ನಡೆದ ಕಂದಾಯ ವಿಭಾಗದ ವಿವಿಧ ಇಲಾಖೆಗಳ ಹಾಗೂ ಪ್ರಕೃತಿ ವಿಕೋಪಗಳ ನಿರ್ವಹಣೆ ಕುರಿತ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಮಾತನಾಡಿದ ಅವರು, ಬರಗಾಲ ಎದುರಾಗುವ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕದ ಭಾಗದ ಜನರು ಉದ್ಯೋಗಕ್ಕಾಗಿ ಮಹಾನಗರಗಳಿಗೆ ಗುಳೆಹೋಗುವ ಪ್ರಮಾಣ ಹೆಚ್ಚಿದೆ. ಲಭ್ಯ ಅನುದಾನ ಮತ್ತು ಯೋಜನೆಗಳನ್ನು ಬಳಸಿಕೊಂಡು ಜನರಿಗೆ ತಮ್ಮ ಊರಿನಲ್ಲೇ ಉದ್ಯೋಗ ನೀಡಲು ಕ್ರಮ ವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಕಲಬುರಗಿ ಕಂದಾಯ ಇಲಾಖೆಯ ೧೬ ತಾಲೂಕುಗಳಲ್ಲಿ ಮಳೆ ಕೊರತೆಯಾಗಿದ್ದು, ೧೧ ತಾಲೂಕುಗಳಲ್ಲಿ ಅತೀ ಕಡಿಮೆ ಮಳೆಯಾಗಿದೆ. ಈವರೆಗೆ ಶೇಕಡಾ ೨೮ ರಷ್ಟು ಪ್ರದೇಶಗಳಲ್ಲಿ ಮಾತ್ರ ಬೀಜ ಬಿತ್ತನೆಯಾಗಿದೆ. ಅಧಿಕಾರಿಗಳು ಈ ಕುರಿತು ಗಂಭೀರ ಚಿಂತನೆ ನಡೆಸಿ, ಯೋಜನೆ ರೂಪಿಸಬೇಕು ಎಂದು ತಿಳಿಸಿದ್ದಾರೆ. ರಾಜ್ಯದ ಪ್ರತಿ ತಾಲೂಕಿಗೆ ಒಬ್ಬರಂತೆ ಹಿರಿಯ ಕೆಎಎಸ್ ಅಧಿಕಾರಿಗಳನ್ನು ತಾಲೂಕು ಉಸ್ತುವಾರಿ ಅಧಿಕಾರಿಗಳೆಂದು ನೇಮಕ ಮಾಡಲಾಗಿದೆ. ಬರ ನಿರ್ವಹಣೆಗೆ ಅವರ ಸೇವೆಯನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ಇದೇ ವೇಳೆ, ಕಲಬುರಗಿ

ಕಂದಾಯ ವಿಭಾಗದಲ್ಲಿ ಬಾಕಿ ಉಳಿದಿರುವ ೨ ಲಕ್ಷದ ೨೩ ಸಾವಿರದ ೧೯೦ ಇ-ಪೌತಿ ಪ್ರಕರಣಗಳನ್ನು ಕಾಲಮಿತಿಯೊಳಗೆ ಇತ್ಯರ್ಥಗೊಳಿಸುವಂತೆ ಪರಮೇಶ್ವರ್ ಸೂಚಿಸಿದ್ದಾರೆ. ವಿಜಯನಗರ, ಕಲಬುರಗಿ, ಬೀದರ್ ಮತ್ತು ಕೊಪ್ಪಳ ಜಿಲ್ಲೆಯಲ್ಲಿ ಅತಿ ಹೆಚ್ಚಿನ ಇ-ಪೌತಿ ಪ್ರಕರಣಗಳು ಬಾಕಿ ಉಳಿದಿದ್ದು, ಆದ್ಯತೆಯ ಮೇರೆಗೆ ಎರಡು ತಿಂಗಳೊಳಗಾಗಿ ಪೂರ್ಣಗೊಳಿಸಬೇಕು ಎಂದು ತಿಳಿಸಿದ್ದಾರೆ.

<><><>

ರಾಜ್ಯದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಅಕ್ರಮ ನಡೆಯುತ್ತಿದೆ ಎಂದು ಆರೋಪಿಸಿ, ಬಿಜೆಪಿ ಮತ್ತು ಜೆಡಿಎಸ್ ನೇತೃತ್ವದ ಎನ್‌ಡಿಎ ನಿಯೋಗ ನವದೆಹಲಿಯಲ್ಲಿಂದು ಮುಖ್ಯ ಚುನಾವಣಾ ಆಯುಕ್ತರಿಗೆ ದೂರು ನೀಡಿದೆ. ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಹಾಗೂ ಪ್ರಲ್ಹಾದ್ ಜೋಶಿ ನೇತೃತ್ವದ ನಿಯೋಗ ದಾಖಲೆಗಳ ಸಮೇತ ಆಯೋಗಕ್ಕೆ ದೂರು ಸಲ್ಲಿಸಿದೆ. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಬಿಎಲ್‌ಒಗಳು ಮನೆ ಮನೆಗೆ ತೆರಳಿ, ಮತಪಟ್ಟಿ ಪರಿಷ್ಕರಣೆ ಮಾಡಬೇಕೆಂಬ ಬಗ್ಗೆ ಚುನಾವಣಾ ಆಯೋಗದ ನಿಯಮವಿದೆ. ಆದರೆ. ರಾಜ್ಯದಲ್ಲಿ ಮಸೀದಿ, ದರ್ಗಾ, ಸಮುದಾಯ ಭವನಗಳಲ್ಲಿ ಕುಳಿತು ಎಸ್‌ಐಆರ್ ಪ್ರಕ್ರಿಯೆ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಮಾತನಾಡಿ, ಕೇಂದ್ರ ಚುನಾವಣಾ ಆಯೋಗವು, ರಾಜ್ಯಕ್ಕೆ ಈಗಾಗಲೇ ವೀಕ್ಷಕರನ್ನು ಕಳುಹಿಸಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆಯ ಮೇಲುಸ್ತುವಾರಿ ವಹಿಸಲು ಹೊರರಾಜ್ಯದ ದಕ್ಷ ಅಧಿಕಾರಿನ್ನು ನೇಮಕ ಮಾಡಲು ಕೋರಲಾಗಿದೆ ಎಂದು ಮಾಹಿತಿ ನೀಡಿದರು. ನಿಯೋಗದಲ್ಲಿ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ, ಉಪನಾಯಕ ಅರವಿಂದ್ ಬೆಲ್ಲದ್, ವಿಧಾನಪರಿಷತ್ ವಿಪಕ್ಷ ನಾಯಕ ಚಲವಾದಿ ನಾರಾಯಣ ಸ್ವಾಮಿ ಸೇರಿದಂತೆ ಹಲವು ಮುಖಂಡರು ಇದ್ದರು.

<><><>

ಕರ್ನಾಟಕ ವಿಶ್ವಬ್ಯಾಂಕ್‌ನ ಮೇಲ್ಮಧ್ಯಮ ಆದಾಯದ ಮಿತಿಯನ್ನು ದಾಟಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಇದು ರಾಜ್ಯದ ಉದ್ಯಮಿಗಳು, ರೈತರು, ಕಾರ್ಮಿಕರು, ಮಹಿಳೆಯರು ಮತ್ತು ಯುವಕರ ಸಾಮೂಹಿಕ ಪ್ರಯತ್ನಗಳನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ಈ ಐತಿಹಾಸಿಕ ಸಾಧನೆಗೆ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಕಾರಣವಾಗಿದ್ದು, ಗ್ಯಾರಂಟಿ ಯೋಜನೆಗಳಿಂದ ಗೃಹ ಆದಾಯ ಹೆಚ್ಚಳವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಜನರು ಅಭಿವೃದ್ಧಿ ಹೊಂದಿದಾಗ ಆರ್ಥಿಕತೆಯೂ ಅಭಿವೃದ್ಧಿ ಹೊಂದಲು ಸಾಧ್ಯ ಎಂಬುದನ್ನು ಕರ್ನಾಟಕ ತೋರಿಸಿಕೊಟ್ಟಿದೆ ಎಂದು ತಿಳಿಸಿದ್ದಾರೆ.

<><><>

ಮೈಸೂರು ನಗರದಲ್ಲಿ ಪ್ರಗತಿಯಲ್ಲಿರುವ ಮೇಲ್ಸೇತುವೆ ನಿರ್ಮಾಣ ಕಾಮಗಾರಿಯನ್ನು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಇಂದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಕಾಮಗಾರಿಯ ಪ್ರಗತಿ, ಗುಣಮಟ್ಟ ಹಾಗೂ ಅನುಷ್ಠಾನದ ವಿವಿಧ ಅಂಶಗಳ ಕುರಿತು ಅಧಿಕಾರಿಗಳೊಂದಿಗೆ ಸಮಗ್ರ ಚರ್ಚೆ ನಡೆಸಿದ ಸಚಿವರು, ಕಾಮಗಾರಿಯನ್ನು ನಿಗದಿತ ಕಾಲಮಿತಿಯೊಳಗೆ ಉತ್ತಮ ಗುಣಮಟ್ಟದೊಂದಿಗೆ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಕಾಮಗಾರಿ ನಡೆಯುವ ಅವಧಿಯಲ್ಲಿ ಸುರಕ್ಷತೆ ಮತ್ತು ಸುಗಮ ಸಂಚಾರ ನಿರ್ವಹಣೆಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><><>

ಉತ್ತರಕನ್ನಡ ಜಿಲ್ಲೆಯ ಮಲೆನಾಡು ಭಾಗಗಳಲ್ಲಿ ವ್ಯಾಪಕವಾಗಿ ಮಳೆ ಸುರಿಯುತ್ತಿದೆ. ಭಾರೀ ಮಳೆ ಜೊತೆ ಬೀಸಿದ ಗಾಳಿಗೆ ಹಲವೆಡೆ ಮನೆ, ತೋಟಗಳಿಗೆ ಹಾನಿಯಾಗಿದೆ. ವಿದ್ಯುತ್ ಕಂಬಗಳು ಧರೆಗುರುಳಿದ್ದು, ವಿದ್ಯುತ್ ಪೂರೈಕೆ ಅಸ್ತವ್ಯಸ್ತವಾಗಿದೆ. ನಿರಂತರ ಮಳೆಯ ಪರಿಣಾಮ ವರದಾ ನದಿಯ ಒಳಹರಿವು ಹೆಚ್ಚಳವಾಗಿದೆ. ವರದಾ ನದಿ ಪ್ರವಾಹ ಸೃಷ್ಟಿಸುವ ಹಂತಕ್ಕೆ ಬಂದರೆ ಅದನ್ನು ಎದುರಿಸಲು ಕಂದಾಯ ಇಲಾಖೆ ಸಂಪೂರ್ಣ ಸಿದ್ಧವಾಗಿದೆ. ಅಗತ್ಯವಿದ್ದಲ್ಲಿ ಮೊಗವಳ್ಳಿ ಪ್ರಾಥಮಿಕ ಶಾಲೆಯಲ್ಲಿ ಗಂಜಿ ಕೇಂದ್ರ ತೆರೆಯಲು ಸಿದ್ಧತೆ ಮಾಡಿಕೊಳ್ಳಲಾಗಿದೆ.

<><><><>

ದಕ್ಷಿಣಕನ್ನಡ, ಉಡುಪಿ, ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡೆ ಧಾರಾಕಾರ ಮಳೆಯಾಗುತ್ತಿದೆ. ಕಾವೇರಿ, ಲಕ್ಷ್ಮಣತೀರ್ಥ ನದಿಗಳಲ್ಲಿಯೂ ನೀರಿನ ಹರಿವು ಹೆಚ್ಚಾಗಿದೆ. ನದಿ, ತೊರೆ, ಜಲಧಾರೆಗಳ ಬಳಿ ಜನರು ತೆರಳದಂತೆ ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ. ಸೋಮವಾರಪೇಟೆ ತಾಲೂಕಿನ ಮಲ್ಲಳ್ಳಿ ಜಲಪಾತದಲ್ಲಿ ಸೆಲ್ಫಿ ತಗೆಯಲು ತೆರಳಿ ನದಿ ಮಧ್ಯೆಯ ಕಲ್ಲುಬಂಡೆಯಲ್ಲಿ ಸಿಲುಕಿದ್ದ ಆಂಧ್ರದ ಇಬ್ಬರು ಪ್ರವಾಸಿಗರನ್ನು ಅಗ್ನಿಶಾಮಕ ದಳದ ಸಿಬ್ಬಂದಿ ರಕ್ಷಿಸಿದ್ದಾರೆ. ಮಡಿಕೇರಿ ಸರ್ಕಾರಿ ಬಸ್ ನಿಲ್ದಾಣದ ಬಳಿ ಇತ್ತೀಚೆಗಷ್ಟೇ ನಿರ್ಮಿಸಲಾಗಿದ್ದ ೩೫ ಲಕ್ಷ ರೂಪಾಯಿ ವೆಚ್ಚದ ಪಾದಾಚಾರಿ ಮಾರ್ಗ ಮಳೆನೀರು ಹರಿದು ಸಂಪೂರ್ಣ ಕೊಚ್ಚಿಕೊಂಡು ಹೋಗಿದೆ. ಹಾರಂಗಿ ಜಲಾಶಯಕ್ಕೆ ೧ ಸಾವಿರದ ೭೦೦ ಕ್ಯೂಸೆಕ್ ನೀರಿನ ಒಳಹರಿವಿದೆ.

<><><><>

ಬೆಳಗಾವಿ ಜಿಲ್ಲೆಯಲ್ಲಿ ಅತಿವೃಷ್ಟಿಯಿಂದಾಗಿ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಗುರುತಿಸಲಾದ ೩೯೭ ಕಾಳಜಿ ಕೇಂದ್ರಗಳಲ್ಲಿ ಅಗತ್ಯ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯಲ್ಲಿ ಮಾತನಾಡಿದ ಅವರು, ಕಳೆದ ಮೂರು ದಿನಗಳಿಂದ ನೆರೆಯ ಮಹಾರಾಷ್ಟ್ರ ಹಾಗೂ ಬೆಳಗಾವಿ ಜಿಲ್ಲೆಯ ಒಂಭತ್ತು ತಾಲೂಕುಗಳಲ್ಲಿ ವ್ಯಾಪಕ

ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಜಿಲ್ಲೆಯ ನದಿ ಪಾತ್ರದ ಗ್ರಾಮಗಳಲ್ಲಿ ಎದುರಾಗಬಹುದಾದ ಸಂಭವನೀಯ ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಅಧಿಕಾರಿಗಳು ಸನ್ನದ್ಧರಾಗಿರಬೇಕು ಎಂದು ನಿರ್ದೇಶನ ನೀಡಿದ್ದಾರೆ. ಎಸ್.ಡಿ.ಆರ್.ಎಫ್ ಹಾಗೂ ಅಗ್ನಿ ಶಾಮಕ ತಂಡಗಳು ಪ್ರವಾಹ ಪರಿಸ್ಥಿತಿ ಎದುರಿಸಲು ಸದಾ ಸನ್ನದ್ಧವಾಗಿರಬೇಕು ಎಂದು ತಿಳಿಸಿದ್ದಾರೆ.

<><><><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಳೆದ ಹಲವು ದಿನಗಳಿಂದ ಉತ್ತಮ ಮಳೆಯಾಗಿದ್ದು, ಕರಾವಳಿ ಜಿಲ್ಲೆಗಳು ಹಾಗೂ ಮಲೆನಾಡು ಭಾಗದ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುತ್ತಿದೆ. ಇಂದು ಉತ್ತರಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಬೆಳಗಾವಿ ಜಿಲ್ಲೆಗಳ ಒಂದೆರಡು ಕಡೆ ಭಾರೀ ಮಳೆಯಾಗುವ ಮುನ್ಸೂಚನೆ ಇದ್ದು, ಈ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕರಾವಳಿ ಜಿಲ್ಲೆಗಳಲ್ಲಿ ಇದೇ ೯ ರಂದು ೧೦, ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ೯ ರಂದು ಹಾಗೂ ಉತ್ತರ ಒಳನಾಡು ಜಿಲ್ಲೆಗಳಲ್ಲಿ ೮ ಹಾಗೂ ೯ ರಂದು ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಯಲ್ಲೋ ಅಲರ್ಟ್ ನೀಡಲಾಗಿದೆ.

<><><><>

ರಾಜ್ಯದ ವಿವಿಧೆಡೆ ಮತದಾರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಮುಂದುವರಿದಿದೆ. ಬೆಳಗಾವಿ ಜಿಲ್ಲೆಯಲ್ಲಿ ಎಸ್ಐಆರ್ ಪ್ರಕ್ರಿಯೆಯಲ್ಲಿ ಶಾಲಾ ಮಕ್ಕಳನ್ನು ಬಳಸಲಾಗಿದೆ ಎಂಬ ಆರೋಪ ಕುರಿತಂತೆ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತನಿಖೆಗೆ ಆದೇಶಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಚುರುಕಿನಿಂದ ಸಾಗಿದ್ದು, ಜಿಲ್ಲೆಯಲ್ಲಿ ಇದುವರೆಗೂ ಒಟ್ಟು ೧೨ ಲಕ್ಷದ ೩೦ ಸಾವಿರದ ೩೭ ಮತದಾರರಿದ್ದು, ೧೧ ಲಕ್ಷದ ೪೮ ಸಾವಿರದ ೭೭೬ ಮಂದಿಯ ಮ್ಯಾಪಿಂಗ್ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯಾ ಮಾಹಿತಿ ನೀಡಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಈಗಾಗಲೇ ಶೇಕಡಾ ೯೧.೯ ಮತದಾರರ ಮ್ಯಾಪಿಂಗ್ ಕಾರ್ಯ ಮುಗಿದಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಗಳು ಬಿರುಸಿನಿಂದ ಸಾಗುತ್ತಿದ್ದು, ಮತದಾರರಿಗೆ ಜಾಗೃತಿ ಮೂಡಿಸುವ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಗದಗ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯು ಪ್ರಾರಂಭವಾಗಿದ್ದು, ೩೬ ಸಾವಿರದ ೯೭೯ ಗಣತಿ ನಮೂನೆ ಡಿಜಟಲೀಕರಣಗೊಂಡಿವೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಆದೇಶದ ಮೇರೆಗೆ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕುರಿತಂತೆ ಇಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಡಾ. ಯತೀಂದ್ರ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಸಭೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತು ಚರ್ಚೆ ನಡೆಸಲಾಯಿತು

<><><><>

ಚಿಕ್ಕಮಗಳೂರಿನ ಕಳಸ ತಾಲೂಕಿನ ಬಿಳಗುಳಿ ಗ್ರಾಮದಲ್ಲಿ ಕಾಫಿ ತೋಟದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕ ಮಹಿಳೆ ಮೇಲೆ ಕಾಡು ಕೋಣ ದಾಳಿ ನಡೆಸಿದ್ದು ಮಹಿಳೆ ಮೃತಪಟ್ಟಿದ್ದಾರೆ. ತೀವ್ರವಾಗಿ ಗಾಯಗೊಂಡ ಮಹಿಳೆಯನ್ನು ಆಸ್ಪತ್ರೆಗೆ ಕರೆದೊಯುವ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ ಎಂದು ಕಳಸ ಠಾಣೆ ಪೊಲೀಸರು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>